# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 460(481) |
| ಸದಸ್ಯರ ಹೆಸರು | : | ಶ್ರೀ ಶಾಂತಾರಾಮ್ ಬುಡ್ನ ಸಿದ್ಧಿ |
| ಉತ್ತರಿಸುವ ದಿನಾಂಕ | : | 12.12.2024 |
| ಉತ್ತರಿಸುವ ಸಚಿವರು | : | ಸನ್ಮಾನ್ಯ ಮುಖ್ಯಮಂತ್ರಿಯವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಮೈಸೂರಿನಲ್ಲಿರುವ ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆಯಲ್ಲಿ ನಿರ್ದೇಶಕರ ಹುದ್ದೆ ಖಾಲಿ ಇರುವುದರ ಕುರಿತು ನಿರಂತರವಾಗಿ ಪತ್ರಿಕೆಗಳಲ್ಲಿ ವರದಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು; | ಹೌದು, ಬಂದಿದೆ<br>ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆಗೆ ನಿರ್ದೇಶಕರಾಗಿ ಡಾ.ಎ.ಎಸ್ . ಪ್ರಭಾಕರ್ ಪ್ರಾಧ್ಯಾಪಕರು, ಬುಡಕಟ್ಟು ಅಧ್ಯಯನ ವಿಭಾಗ ಕನ್ನಡ ವಿಶ್ವವಿದ್ಯಾನಿಲಯ, ಹಂಪಿ ಇವರನ್ನು ಸರ್ಕಾರದ ಅಧಿಸೂಚನೆ ಸಂಖ್ಯೆ: ಸಕಇ/221/ಎಸ್ ಟಿಪಿ/ 2023ರ ದಿನಾಂಕ: 30-08-2024ರಲ್ಲಿನೇಮಿಸಲಾಗಿದೆ.<br>ಸದರಿ ನೇಮಕಾತಿಯ ವಿರುದ್ಧ, ಪ್ರೊ.ಟಿ.ಟಿ ಬಸವವಗೌಡ ಪ್ರಾಧ್ಯಪಕರು, ಮಾನವಶಾಸ್ತ್ರ ವಿಭಾಗ ಕರ್ನಾಟಕ ವಿಶ್ವವಿದ್ಯಾನಿಲಯ ದಾರವಾಡ ಇವರು ಕರ್ನಾಟಕ ರಾಜ್ಯ ಉಚ್ಚ ನ್ಯಾಯಾಲಯ, ಧಾರವಾಡ ಪೀಠ ಇಲ್ಲಿ W.P NO. 105281/2024 ಪ್ರಕರಣ ದಾಖಲಿಸಿದ್ದು, ಮಾನ್ಯ ನ್ಯಾಯಾಲಯವು ತಡೆಯಾಜ್ಞೆ ನೀಡಿರುತ್ತದೆ. ಪ್ರಸ್ತುತ ಪ್ರಕರಣ ನ್ಯಾಯಾಲಯದಲ್ಲಿ ಬಾಕಿ ಇದೆ.<br>ಆಡಳಿತಾತ್ಮಕ ಹಿತದೃಷ್ಟಿಯಿಂದ ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆಯ ನಿರ್ದೇಶಕರ ಹುದ್ದೆಗೆ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ಹಿರಿಯ ಅಧಿಕಾರಿಯನ್ನು ಹೆಚ್ಚುವರಿ ಪ್ರಭಾರದಲ್ಲಿರಿಸಲಾಗಿದೆ. |
| ಆ) | ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆಯಲ್ಲಿಎಷ್ಟು ಜನ ಬುಡಕಟ್ಟು ಸಮಾಜದ ಉನ್ನತ ಶಿಕ್ಷಣ ಪಡೆದ ವಿದ್ಯಾವಂತ ಯುವಕರಿಗೆ ಸೇವೆ ಮಾಡಲು ಅವಕಾಶ ಕಲ್ಪಿಸಲಾಗಿದೆ; (ವಿಭಾಗವಾರು ಮಾಹಿತಿ ನೀಡುವುದು ) | ಜನಾಂಗೀಯ ಆಧಾರದ ಮೇಲೆ ನೇಮಕಾತಿ ಮಾಡಲು ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಅವಕಾಶವಿರುವುದಿಲ್ಲ.<br>ಮುಂದುವರೆದು, ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆಯಲ್ಲಿ, ಈ ಮುಂದೆ ತಿಳಿಸಿರುವಂತೆ ಹೊರಸಂಪನ್ಮೂಲ ಆಧಾರದ ಮೇಲೆ ಕರ್ತವ್ಯನಿರ್ವಹಿಸುತ್ತಿರುತ್ತಾರೆ.<br>1) ಸಂಶೋಧನಾಧಿಕಾರಿ (ಎಸ್.ಟಿ)<br>2) ಕ್ಷೇತ್ರ ಸಂಶೋಧಕರು (ಎಸ್.ಟಿ)<br>3) ಕ್ಷೇತ್ರ ಸಂಶೋಧಕರು (ಎಸ್.ಟಿ)<br>4) ಸಂಶೋಧನಾ ಸಹಾಯಕ (ಎಸ್.ಟಿ)<br>5) ಪ್ರಥಮ ದರ್ಜೆ ಸಹಾಯಕ (ಎಸ್.ಟಿ)<br>6) ದ್ವಿತೀಯ ದರ್ಜೆ ಸಹಾಯಕ (ಎಸ್.ಟಿ)<br>7) ಗ್ರೂಪ್ "ಡಿ" (ಎಸ್.ಟಿ) |
| | ಇ)ಸದರಿ ಸಂಸ್ಥೆಯಲ್ಲಿ ಮೂಲ ಬುಡಕಟ್ಟು ಸಮಾಜದ ವಿದ್ಯಾವಂತರನ್ನು ಯುವಕರನ್ನು ಸಂಶೋಧನಾ ಅಧಿಕಾರಿಗಳನ್ನಾಗಿ ನೇಮಿಸುವ ಯೋಚನೆ ಸರ್ಕಾರಕ್ಕೆ ಇದೆಯೇ; ಹಾಗಿದ್ದಲ್ಲಿ ಸರ್ಕಾರದ ಮುಂದಿನ ಕ್ರಮಗಳ ಕುರಿತು ಮಾಹಿತಿ ಒದಗಿಸುವುದು? | ಸಂಶೋಧನಾ ಅಧಿಕಾರಿ ವೃಂದದ ಹುದ್ದೆಗೆ ಸಂಸ್ಥೆಯ ವೃಂದ ಮತ್ತು ನೇಮಕಾತಿ ನಿಯಮಾವಳಿಗಳನ್ವಯ ನೇಮಕಾತಿ/ನಿಯೋಜನೆ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿರುತ್ತದೆ. |

ಸಂಖ್ಯೆ: STW/SECB/STP/132/2024

(ಸಿದ್ದರಾಮಯ್ಯ)
ಮುಖ್ಯಮಂತ್ರಿ